ಸಂಖ್ಯೆ: ಆಡಳಿತ/ನೇಮಕಾತಿ/10527 / 2018
ಅಡಕ: ನೇಮಕಾತಿ ಅಧಿಸೂಚನೆ

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ,
ಮೈಸೂರು, ದಿನಾಂಕ 11.06.2018.
ದೂರವಾಣಿ : 0821 – 2330452
0821 – 2332477

ಗೆ

recruitment@karnataka.gov.in

ಮಾನ್ಯರೇ,

ವಿಷಯ: ದಿನಾಂಕ 11.06.2018 ರ ಈ ಕಛೇರಿಯ ನೇಮಕಾತಿ ಅಧಿಸೂಚನೆ ಸಂಖ್ಯೆ: ಆಡಳಿತ/ನೇಮಕಾತಿ/ಸೇ/10372/2018ನ್ನು ಕಳುಹಿಸುತ್ತಿರುವ ಕುರಿತು.

ಉಲ್ಲೇಖ: ದಿನಾಂಕ 03.07.2017 ನೇ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ರವರ ಸುತ್ತೋಲೆ ಸಂಖ್ಯೆ ಸಿಆಸುಇ 36 EGM 2017.

✧ * ✧ * ✧

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ 11.06.2018 ರ ಈ ಕಛೇರಿಯ ನೇಮಕಾತಿ ಅಧಿಸೂಚನೆ ಸಂಖ್ಯೆ: ಆಡಳಿತ/ನೇಮಕಾತಿ/ಸೇ/10372/2018ರ ಅನ್ವಯ ಮೈಸೂರು ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಸೇವಕರ 39 ಹುದ್ದೆಗಳ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಉಲ್ಲೇಖಿತ ಸುತ್ತೋಲೆಯ ನಿರ್ದೇಶನದಂತೆ ಈ ಪತ್ರದೊಂದಿಗೆ ಸದರಿ ನೇಮಕಾತಿ ಅಧಿಸೂಚನೆಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ. ಸುತ್ತೋಲೆಯಲ್ಲಿ ತಿಳಿಸಿರುವಂತೆ ನಿಗದಿತ ನಮೂನೆಯಲ್ಲಿ ಮಾಹಿತಿಯನ್ನು ಮಿಂಚಂಚೆ ಮುಖಾಂತರ ಕಳುಹಿಸಲಾಗಿದೆ.

| ಕ್ರ.ಸಂಖ್ಯೆ | ಹುದ್ದೆಗಳ ಪದನಾಮ/ಸಂಕ್ಷಿಪ್ತ ವಿವರ | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ |
|---|---|---|
| 1. | ಸೇವಕರ 39 ಹುದ್ದೆಗಳು<br>ವಿವರ: ಆನ್‌ಲೈನ್ ಮುಖಾಂತರ ಅರ್ಜಿಗಳನ್ನು http://ecourts.gov.in/mysuru/online-recruitment ರಲ್ಲಿ ನೀಡಲಾದ ಲಿಂಕ್ ಮೂಲಕ ದಿನಾಂಕ 27.06.2018 ರಿಂದ ಸಲ್ಲಿಸಬೇಕು. ಸಂಪೂರ್ಣ ಮಾಹಿತಿಯನ್ನು ಮೈಸೂರು ನ್ಯಾಯಾಂಗ ಘಟಕದ ವೆಬ್‌ಸೈಟ್‌ನಲ್ಲಿ ಪರಿಶೀಲಿಸಬಹುದಾಗಿರುತ್ತದೆ. | 26.07.2018 |

ಸುತ್ತೋಲೆಯಲ್ಲಿನ ನಿರ್ದೇಶನದಂತೆ ಸದರಿ ಮಾಹಿತಿಯನ್ನು ನಿಗದಿತ ಜಾಲತಾಣದಲ್ಲಿ ಪ್ರಕಟಿಸಲು ಕೋರಲಾಗಿದೆ.

ತಮ್ಮ ವಿಶ್ವಾಸಿ,

(ಎಸ್.ಕೆ.ವಂಟಿಗೋಡಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು.

Prl District & Sessions Judge
MYSURU

# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು
ದೂರವಾಣಿ ಸಂಖ್ಯೆ: 0821-2330452

**ನೇಮಕಾತಿ ಅಧಿಸೂಚನೆ ಸಂಖ್ಯೆ:ಆಡಳಿತ/ನೇಮಕಾತಿ/ಸೇ/10372/2018**
ದಿನಾಂಕ: 11.06.2018

ವಿಷಯ:- ಮೈಸೂರು ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ 39 ಸೇವಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

****

ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು ಘಟಕದಲ್ಲಿ ಖಾಲಿ ಇರುವ ಸೇವಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಮೈಸೂರು ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ http://ecourts.gov.in/mysuru/online-recruitment ರಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ದಿನಾಂಕ 27.06.2018 ರಿಂದ ದಿನಾಂಕ: 26.07.2018 ರ ರಾತ್ರಿ 11.59ರವರೆಗೆ ಮಾತ್ರ ಸಲ್ಲಿಸತಕ್ಕದ್ದು ಮತ್ತು ಭಾರತೀಯ ಸ್ಟೇಟ್ ಬ್ಯಾಂಕ್ ಚಲನ್ ಮುಖಾಂತರ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: 29.07.2018 ಆಗಿರುತ್ತದೆ.

ಹುದ್ದೆಯ ಹೆಸರು: ಸೇವಕರು

ಖಾಲಿ ಹುದ್ದೆಗಳು – 39

ವೇತನ ಶ್ರೇಣಿ : 17000-400-18600-450-20400-500-22400-550-24600-600-27000-650-28950

## ಹುದ್ದೆಗಳ ವರ್ಗೀಕರಣಃ 39 ಹುದ್ದೆಗಳು

| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ | ಮಾಂಸೈ | ಕಂಮಾಂಅಂ | ಯೋಂನಿಂಅಂ | ಅಂಂಅಂ | ಒಟ್ಟು |
|---|---|---|---|---|---|---|---|---|
| ಪಂಜಾತಿ | 01 | 02 | 01 | - | 01 | 01 | - | 06 |
| ಪಂಪಂಗಡ | - | 01 | - | - | - | - | - | 01 |
| ಪ್ರವರ್ಗ-1 | 01 | - | - | - | - | - | - | 01 |
| 2 ಎ | 02 | 01 | 02 | 01 | - | - | - | 06 |
| 2 ಬಿ | - | 01 | - | - | - | - | - | 01 |
| 3 ಎ | - | 01 | - | - | - | - | 01* | 02 |
| 3 ಬಿ | - | 01 | 01 | - | - | - | - | 02 |
| ಸಾಮಾನ್ಯ | 03 | 07 | 05 | 02 | 01 | 01 | 01* | 20 |
| ಒಟ್ಟು | 07 | 14 | 09 | 03 | 02 | 02 | 02 | 39 |

- ದೃಷ್ಟಿಮಾಂದ್ಯ / ದೃಷ್ಟಿದೋಷವುಳ್ಳ ಅಭ್ಯರ್ಥಿ (Blind & Low Vision)

ವಿದ್ಯಾರ್ಹತೆಃ 7ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

ಆಯ್ಕೆಯ ವಿಧಾನಃ ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ 01 ಹುದ್ದೆಗೆ 10 ಅಭ್ಯರ್ಥಿಗಳಂತೆ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿಃ ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಹಾಗೂ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ ಆಯಾ ಪ್ರವರ್ಗಗಳ ಅರ್ಹ ಅಭ್ಯರ್ಥಿಗಳ ಲಭ್ಯತೆಯ ಕೊರತೆಯಿಂದಾಗಿ ಭರ್ತಿ ಮಾಡಲಾಗದ ರಿಕ್ತ ಸ್ಥಾನಗಳನ್ನು ಬ್ಯಾಕ್‌ಲಾಗ್ ಎಂದು ಪರಿಗಣಿಸಿ ಮುಂದಕ್ಕೆ ಕೊಂಡೊಯ್ಯಲಾಗುವುದು.

ವಿಶೇಷ ಟಿಪ್ಪಣಿ: ಆಯ್ಕೆಯಾದ ಅಭ್ಯರ್ಥಿಗಳು (NPS) ನೂತನ ಪಿಂಚಣಿ ಯೋಜನೆಗೆ ಒಳಪಡುತ್ತಾರೆ

## ವಯೋಮಿತಿ:

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

ಅ. ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

ಆ. ಗರಿಷ್ಠ ವಯೋಮಿತಿ

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| 2ಎ, 2ಬಿ, 3ಎ, 3ಬಿ | 38 ವರ್ಷ |
| ಪ.ಜಾತಿ, ಪ.ಪಂಗಡ, ಪ್ರವರ್ಗ – 1 | 40 ವರ್ಷ |

ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು.

## ವಯೋಮಿತಿ ಸಡಿಲಿಕೆ:

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

1. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

2. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

3. ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.

4. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೊ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೊ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

5. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

6. ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

7. ಮಾಜಿ ಸೈನಿಕರು, ವಿಧವೆಯರು, ಅಂಗವಿಕಲರು ಮತ್ತು ಜೀತಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದೊಳಗಾಗಿ ಪಡೆದಿಟ್ಟುಕೊಂಡಿರತಕ್ಕದ್ದು.

**ವಿಶೇಷ ಸೂಚನೆ:**

- ಎಲ್ಲಾ ಪ್ರಮಾಣ ಪತ್ರಗಳು ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು
- ಅಭ್ಯರ್ಥಿಯು ವ್ಯಾಸಂಗ ಮಾಡಿದ ಶಾಲೆಯಿಂದ, ಮುಖ್ಯೋಪಾಧ್ಯಾಯರಿಂದ ಸಹಿ ಪಡೆದ 7ನೇ ತರಗತಿಯ ಅಂಕಪಟ್ಟಿಯನ್ನು ಕೊನೆಯ ದಿನಾಂಕದೊಳಗೆ ಪಡೆದಿರಬೇಕು.
- 7ನೇ ತರಗತಿಯ ಅಂಕಗಳು ಶ್ರೇಣಿಯಲ್ಲಿದ್ದರೆ (Grade) ಅಂಕಗಳಾಗಿ ಪರಿವರ್ತಿಸಿ, ಗರಿಷ್ಠ ಅಂಕಗಳು, ಪಡೆದ ಅಂಕಗಳು ಮತ್ತು ಫಲಿತಾಂಶವನ್ನು ನಮೂದಿಸಿದ ಅಂಕಪಟ್ಟಿಯನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದಿರಬೇಕು.
- ಅಂಕಪಟ್ಟಿಯು ತ್ರೈಮಾಸಿಕ/ಸೆಮಿಸ್ಟರ್ ಅಂಕಗಳಲ್ಲಿದ್ದರೆ, ಎಲ್ಲಾ ತ್ರೈಮಾಸಿಕ/ ಸೆಮಿಸ್ಟರ್ ಅಂಕಗಳನ್ನು ಕ್ರೋಡೀಕರಿಸಿ ಅಂಕಪಟ್ಟಿಯನ್ನು ಪಡೆದಿರಬೇಕು.